ಜನಸಂಖ್ಯಾ ನೋಂದಣಿಗಾಗಿ ₹3,941 ಕೋಟಿ ಮಂಜೂರು: ಗೊಂದಲ ಮೂಡಿಸಿದ ನಡೆ

# ಈಗ ಜನಸಂಖ್ಯೆ ಸರದಿ

ಪ್ರಜಾವಾಣಿ ವಾರ್ತೆ

ನವದೆಹಲಿ: ರಾಷ್ಟ್ರೀಯ ಜನಸಂಖ್ಯಾ ನೋಂದಣಿಯ (ಎನ್‌ಪಿಆರ್) ಪರಿಷ್ಕರಣೆಗೆ ₹3,941 ಕೋಟಿ ವೆಚ್ಚಕ್ಕೆ ಕೇಂದ್ರ ಸಂಪುಟವು ಮಂಗಳವಾರ ಒಪ್ಪಿಗೆ ಕೊಟ್ಟಿದೆ. ಆದರೆ, ಈಗ ಭಾರಿ ವಿವಾದಕ್ಕೆ ಕಾರಣವಾಗಿರುವ ರಾಷ್ಟ್ರೀಯ ಪೌರತ್ವ ನೋಂದಣಿಯ (ಎನ್‌ಆರ್‌ಸಿ) ಮೊದಲ ಹಂತವಾಗಿ ಎನ್‌ಪಿಆರ್ ಮಾಡಲಾಗುತ್ತಿದೆಯೇ ಎಂಬ ಅನುಮಾನ ಹುಟ್ಟಿಕೊಂಡಿದೆ.

ರಾಷ್ಟ್ರೀಯ ಜನಸಂಖ್ಯಾ ನೋಂದಣಿ 'ಎನ್‌ಆರ್‌ಸಿ ರಚನೆಯ ಮೊದಲ ಹೆಜ್ಜೆ' ಎಂದು ಕೇಂದ್ರ ಗೃಹ ಸಚಿವಾಲಯವು ಸ್ಪಷ್ಟವಾಗಿ ಹೇಳಿದೆ. 2018-19ರ ವಾರ್ಷಿಕ ವರದಿಯಲ್ಲಿ ಈ ವಿಚಾರ ಇದೆ. ಎರಡು ತಿಂಗಳ ಹಿಂದೆ ಈ ವರದಿಯನ್ನು ಪ್ರಕಟಿಸಲಾಗಿದೆ. ಆದರೆ, ಎನ್‌ಪಿಆರ್ ಮತ್ತು ಎನ್‌ಆರ್‌ಸಿ ನಡುವೆ ಯಾವ ಸಂಬಂಧವೂ ಇಲ್ಲ ಎಂದು ಗೃಹ ಸಚಿವ ಅಮಿತ್ ಶಾ ಮತ್ತು ವಾರ್ತಾ ಮತ್ತು ಪ್ರಸಾರ ಸಚಿವ ಪ್ರಕಾಶ್ ಜಾವಡೇಕರ್ ಮಂಗಳವಾರ ಸ್ಪಷ್ಟಪಡಿಸಿದ್ದಾರೆ.

2014ರ ಜುಲೈ-ನವೆಂಬರ್ ನಡುವೆ ರಾಜ್ಯಸಭೆಯಲ್ಲಿ ನೀಡಲಾದ ಎರಡು ಉತ್ತರಗಳು ಮತ್ತು ಗೃಹ ಸಚಿವಾಲಯದ 2018-19ರ ವರದಿಯು ಎನ್‌ಆರ್‌ಸಿ ಮತ್ತು ಎನ್‌ಪಿಆರ್ ನಡುವೆ ಸಂಬಂಧ ಇದೆ ಎಂದೇ ಪ್ರತಿಪಾದಿಸುತ್ತವೆ.

ಎನ್‌ಪಿಆರ್ ದತ್ತಾಂಶದ ಆಧಾರದಲ್ಲಿ ಎನ್‌ಆರ್‌ಸಿ ರೂಪಿಸಲು ಸರ್ಕಾರ ನಿರ್ಧರಿಸಿದೆ' ಎಂದು ಗೃಹ ಖಾತೆಯ ರಾಜ್ಯ ಸಚಿವರಾಗಿದ್ದ ಕಿರಣ್ ರಿಜಿಜು ಅವರು 2014ರ ಜುಲೈ 23ರಂದು ಮತ್ತು ನವೆಂಬರ್ 26ರಂದು ರಾಜ್ಯಸಭೆಯಲ್ಲಿ ಹೇಳಿದ್ದರು. 'ದೇಶದ ಸಾಮಾನ್ಯ ನಿವಾಸಿಗಳ ಪೌರತ್ವ ಸ್ಥಿತಿಯನ್ನು ಪರಿಶೀಲಿಸಿ ಎನ್‌ಆರ್‌ಸಿ ಸಿದ್ಧಪಡಿಸಲಾಗುವುದು' ಹೇಳಿದ್ದರು. ಆದರೆ, 'ಇದನ್ನು ಸಂಪೂರ್ಣವಾಗಿ ಅಲ್ಲಗಳೆಯುತ್ತೇನೆ' ಎಂದು ಜಾವಡೇಕರ್ ಮಂಗಳವಾರ ಹೇಳಿದ್ದಾರೆ. '2010ರಲ್ಲಿ ಯುಪಿಎ ಸರ್ಕಾರವು ಎನ್‌ಪಿಆರ್ ನಡೆಸಿತ್ತು. 2020ರಲ್ಲಿಯೂ ಅದೇ ಪ್ರಕ್ರಿಯೆ ನಡೆಯಲಿದೆ. ಆಗ ಇದನ್ನು ಎಲ್ಲರೂ ಸ್ವಾಗತಿಸಿದ್ದರು. ಆ ಪ್ರಕ್ರಿಯೆಯನ್ನು ಈಗ ಜಾರಿಗೆ ತರಲಾಗುತ್ತಿದೆ' ಎಂದು ಹೇಳಿದ್ದಾರೆ.

## 'ಸಂಬಂಧವೇ ಇಲ್ಲ'



'ಎನ್‌ಪಿಆರ್ ಮತ್ತು ಎನ್‌ಆರ್‌ಸಿ ನಡುವೆ ಯಾವ ಸಂಬಂಧವೂ ಇಲ್ಲ. ಎನ್‌ಪಿಆರ್ ಅನ್ನು ಎನ್‌ಆರ್‌ಸಿ ರಚಿಸಲು ಬಳಸಿಕೊಳ್ಳಲಾಗುವುದು ಎಂದು ನಾವು ಹೇಳಿಯೇ ಇಲ್ಲ' ಎಂದು ಜಾವಡೇಕರ್ ಹೇಳಿದ್ದಾರೆ.

## 'ಎನ್‌ಪಿಆರ್-ಎನ್‌ಆರ್‌ಸಿ'



'ಎನ್‌ಪಿಆರ್ ಎಂದರೆ ಎನ್‌ಆರ್‌ಸಿ. ಮೋದಿ ಸರ್ಕಾರವು ಎಷ್ಟು ಸುಳ್ಳು ಹೇಳುತ್ತಿದೆ? ಎನ್‌ಆರ್‌ಸಿ ಕೆಲಸ ಆರಂಭಿಸಲು ಎನ್‌ಪಿಆರ್‌ನ ಮಾಹಿತಿಯನ್ನು ಬಳಸಿಕೊಳ್ಳಲಾಗುವುದು ಎಂದು ಈ ಸರ್ಕಾರವು ರಾಜ್ಯಸಭೆಯಲ್ಲಿ ಹೇಳಿತ್ತು. ಅದು ರಾಜ್ಯಸಭೆಯ ದಾಖಲೆಯಲ್ಲಿ ಇದೆ' ಎಂದು ಸಿಪಿಎಂ ಪ್ರಧಾನ ಕಾರ್ಯದರ್ಶಿ ಸೀತಾರಾಂ ಯೆಚೂರಿ ಹೇಳಿದ್ದಾರೆ.

## 'ನಾಚಿಕೆಗೇಡು'



'ಮೋದಿ ಅವರೇ ಹೇಳುವಂತೆ ಎನ್‌ಆರ್‌ಸಿ ಬಗ್ಗೆ ಚರ್ಚೆಯೇ ಆಗಿಲ್ಲ. ಇಂದು, ಎನ್‌ಪಿಆರ್ ಮತ್ತು ಎನ್‌ಆರ್‌ಸಿ ನಡುವೆ ವಾರ್ತಾ ಮತ್ತು ಪ್ರಸಾರ ಸಚಿವರಿಗೆ ಯಾವ ಸಂಬಂಧವೂ ಕಾಣಿಸುತ್ತಿಲ್ಲ... ಕೇಂದ್ರ ಗೃಹ ಸಚಿವಾಲಯದ 2018-19ರ ವಾರ್ಷಿಕ ವರದಿ ನೋಡಿ. ಪುಟ 262. ಎನ್‌ಆರ್‌ಸಿ ರೂಪಿಸಲು ಮೊದಲ ಹೆಜ್ಜೆ ಎನ್‌ಪಿಆರ್ ಎಂಬುದು ಅದರಲ್ಲಿ ಇದೆ. ನಾಚಿಕೆಗೇಡು- ಪ್ರಧಾನಿ ಸುಳ್ಳು ಹೇಳಬಾರದು' ಎಂದು ಕಾಂಗ್ರೆಸ್ ಮುಖಂಡ ಅಜಯ ಮಾಕನ್ ಟ್ವೀಟ್ ಮಾಡಿದ್ದಾರೆ.

## ಏನಿದು ಎನ್‌ಪಿಆರ್?

ದೇಶವೊಂದರ 'ಸಾಮಾನ್ಯ ನಿವಾಸಿ'ಗಳ ಪಟ್ಟಿ ಇದು. ವ್ಯಕ್ತಿಯೊಬ್ಬ ಯಾವುದೇ ಪ್ರದೇಶದಲ್ಲಿ ಕನಿಷ್ಠ ಆರು ತಿಂಗಳು ಅಥವಾ ಹೆಚ್ಚು ಕಾಲದಿಂದ ವಾಸಿಸುತ್ತಿದ್ದರೆ ಅಥವಾ ಮುಂದಿನ ಆರು ತಿಂಗಳು ಅಥವಾ ಅದಕ್ಕೂ ಹೆಚ್ಚು ಕಾಲದವರೆಗೆ ಒಂದು ಪ್ರದೇಶದಲ್ಲಿ ವಾಸಿಸಲು ಉದ್ದೇಶಿಸಿದ್ದರೆ ಅಂಥವರನ್ನು 'ಸಾಮಾನ್ಯ ನಿವಾಸಿ' ಎಂದು ಗುರುತಿಸಲಾಗುತ್ತದೆ.

ಹಿಂದೆ 2011ರ ಜನಗಣತಿಯ ಜೊತೆಗೇ ಎನ್‌ಪಿಆರ್ ಕುರಿತ ಅಂಕಿ ಅಂಶಗಳನ್ನೂ ಸಂಗ್ರಹಿಸಲಾಗಿತ್ತು. ಅದಾದ ಬಳಿಕ 2015ರಲ್ಲಿ ಮನೆಮನೆ ಸಮೀಕ್ಷೆ ನಡೆಸುವ ಮೂಲಕ ಅದನ್ನು ಪರಿಷ್ಕರಿಸಲಾಗಿತ್ತು. ಆ ಮಾಹಿತಿಯ ಡಿಜಿಟಲೀಕರಣ ಪ್ರಕ್ರಿಯೆಯೂ ಪೂರ್ಣಗೊಂಡಿದೆ.

**ಎಲ್ಲಿ-ಹೇಗೆ?:** ಪೌರತ್ವ ಕಾಯ್ದೆ-1955ರ, ಪೌರತ್ವ (ನೋಂದಣಿ ಹಾಗೂ ರಾಷ್ಟ್ರೀಯ ಗುರುತುಪತ್ರ ನೀಡಿಕೆ) ನಿಯಮಾವಳಿ- 2003ರ ಅಡಿ ಈ ಪಟ್ಟಿಯನ್ನು ಸಿದ್ಧಪಡಿಸಲಾಗುತ್ತದೆ. ಗ್ರಾಮ, ತಾಲ್ಲೂಕು, ಜಿಲ್ಲೆ, ರಾಜ್ಯ ಹಾಗೂ ರಾಷ್ಟ್ರೀಯ ಮಟ್ಟದಲ್ಲಿ ಎನ್‌ಪಿಆರ್ ಸಿದ್ಧಪಡಿಸಲಾಗುತ್ತದೆ. ಭಾರತದ ಪ್ರತಿಯೊಬ್ಬ ನಿವಾಸಿಯೂ ಇದರಲ್ಲಿ ಹೆಸರು ನೋಂದಾಯಿಸುವುದು ಕಡ್ಡಾಯ.

**ಉದ್ದೇಶವೇನು?:** ದೇಶದ ಸಾಮಾನ್ಯ ನಿವಾಸಿಗಳ ಸಮಗ್ರ ದತ್ತಾಂಶವನ್ನು ಸಂಗ್ರಹಿಸಿಡುವುದು ಎನ್‌ಪಿಆರ್ ಉದ್ದೇಶ. ಅಸ್ಸಾಂ ಒಂದನ್ನು ಬಿಟ್ಟು, ದೇಶದ ಎಲ್ಲಾ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿ ಈ ಪ್ರಕ್ರಿಯೆಯನ್ನು ನಡೆಸಲಾಗುವುದು. 2020ರ ಜನಗಣತಿಯ ಜೊತೆಗೇ ಈ ಮಾಹಿತಿಯನ್ನೂ ಸಂಗ್ರಹಿಸಲಾಗುವುದು. ಅಸ್ಸಾಂನಲ್ಲಿ ಈಗಾಗಲೇ ರಾಷ್ಟ್ರೀಯ ಪೌರತ್ವ ನೋಂದಣಿ (ಎನ್‌ಆರ್‌ಸಿ) ಪ್ರಕ್ರಿಯೆ ನಡೆದಿರುವುದರಿಂದ ಆ ರಾಜ್ಯವನ್ನು ಈ ಪ್ರಕ್ರಿಯೆಯಿಂದ ಹೊರಗಿಡಲಾಗಿದೆ.

NAME OF THE NEWS PAPER
DATE : 25/12/2019